# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2015-16ನೇ ಸಾಲಿನಿಂದ **"ಕೃಷಿ ಉತ್ಸವ"** ಕಾರ್ಯಕ್ರಮದ ಶೀರ್ಷಿಕೆಯನ್ನು **"ಕೃಷಿ ಅಭಿಯಾನ"** ಎಂದು ಬದಲಾಯಿಸುವ ಕುರಿತು.

**ಓದಲಾಗಿದೆ:** ಕೃಷಿ ಆಯುಕ್ತಾಲಯದ ಪತ್ರ ಸಂ.ಪಿಎಲ್‌ಎನ್/ಸಕೃನಿ/ಕೃಷಿ ಅಭಿಯಾನ/2015-16, ದಿನಾಂಕ: 21.05.2015.

**ಪ್ರಸ್ತಾವನೆ:**

2015-16ನೇ ಸಾಲಿನ ಆಯವ್ಯಯ /ಭಾಷಣದ ಕಂಡಿಕೆ-22ರಲ್ಲಿ ಮಾನ್ಯ ಮುಖ್ಯ ಮಂತ್ರಿಯವರು "ಈ ವರ್ಷದ ಮುಂಗಾರು ಮತ್ತು ಹಿಂಗಾರು ಅವಧಿಯ ಪ್ರಾರಂಭದಲ್ಲಿ ಕೃಷಿ ವಿಶ್ವವಿದ್ಯಾನಿಲಯದ ವಿಜ್ಞಾನಿಗಳೊಂದಿಗೆ ಕೃಷಿ ಹಾಗೂ ಅದಕ್ಕೆ ಸಂಬಂಧಿಸಿದಂತೆ ಇಲಾಖೆಗಳ ಎಲ್ಲಾ ಸಿಬ್ಬಂದಿ ಎಲ್ಲಾ ಹೋಬಳಿಗಳಿಗೆ ಪೂರ್ವನಿಗಧಿತ ದಿನಗಳಂದು ಭೇಟಿ ನೀಡಿ ರೈತರೊಂದಿಗೆ ಸಂವಾದ ನಡೆಸಿ, ಬೆಳೆ ಯೋಜನೆಗೆ ಸಂಬಂಧಿಸಿದ ಸಂಶಯ, ಸಮಸ್ಯೆಗಳನ್ನು ನಿವಾರಿಸುವ ಕೃಷಿ ಅಭಿಯಾನ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ" ಎಂದು ಘೋಷಿಸಿದ್ದಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿರುವ ಕೃಷಿ ಆಯುಕ್ತಾಲಯದ ಪತ್ರದಲ್ಲಿ 2008-09ನೇ ಸಾಲಿನಿಂದ ಕೃಷಿ ಇಲಾಖೆಯಿಂದ "ಕೃಷಿ ಉತ್ಸವ" ಎಂಬ ಕಾರ್ಯಕ್ರಮದ ಮೂಲಕ ಕೃಷಿ ಹಾಗೂ ಸಂಬಂಧಿತ ಇಲಾಖೆಗಳ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿತ್ತು. 2015-16ನೇ ಸಾಲಿನಲ್ಲಿ ಈ ಕಾರ್ಯಕ್ರಮವನ್ನು ಕೃಷಿ ಅಭಿಯಾನ ಎಂಬ ಹೆಸರಿನಲ್ಲಿ ಹೋಬಳಿ ಮಟ್ಟಕ್ಕೆ ವಿಸ್ತರಿಸಲು ತೀರ್ಮಾನಿಸಿರುವುದರಿಂದ 2015-16ನೇ ಸಾಲಿನಿಂದ ಕೃಷಿ ವಿಸ್ತರಣೆ ಮತ್ತು ತರಬೇತಿ ಯೋಜನೆಯ ಲೆಕ್ಕ ಶೀರ್ಷಿಕೆ : 2401-00-109-0-21 ಅಡಿ "ಕೃಷಿ ಉತ್ಸವ" ಕಾರ್ಯಕ್ರಮದ ಶೀರ್ಷಿಕೆಯನ್ನು "ಕೃಷಿ ಅಭಿಯಾನ" ಎಂದು ತಿದ್ದುಪಡಿ ಮಾಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಕೃಷಿ ಇಲಾಖೆಯ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ

## ಸರ್ಕಾರದ ಆದೇಶ ಸಂ. ಕೃಇ 70 ಕೃಇಕ 2015, ಬೆಂಗಳೂರು, ದಿನಾಂಕ: 22.07.2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2015-16ನೇ ಸಾಲಿನಿಂದ ಕೃಷಿ ವಿಸ್ತರಣೆ ಮತ್ತು ತರಬೇತಿ ಯೋಜನೆಯ ಲೆಕ್ಕ ಶೀರ್ಷಿಕೆ 2401-00-109-0-21 ಅಡಿ **"ಕೃಷಿ ಉತ್ಸವ"** ಕಾರ್ಯಕ್ರಮದ ಶೀರ್ಷಿಕೆಯನ್ನು **"ಕೃಷಿ ಅಭಿಯಾನ"** ಎಂದು ಮಾರ್ಪಡಿಸಿ, ಕಾರ್ಯಕ್ರಮ ಅನುಷ್ಠಾನಗೊಳಿಸಲು ಆದೇಶಿಸಿದೆ.

ಕೃಷಿ ಆಯುಕ್ತರ ಕಛೇರಿ
9H9
25 JUL 2015
ಶೇಷಾದ್ರಿ ರಸ್ತೆ, ಬೆಂಗಳೂರು

ADA
ADD (HRD) PLN
29/7

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಆರ್. ಎಸ್. ಶಿವಕುಮಾರ್ 23/7

(ಆರ್.ಎಸ್.ಶಿವಕುಮಾರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

22.7.15

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ:5398, ಬೆಂಗಳೂರು-01.

ಪು.ತಿ.ನೋ.

Dl.

2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ:5398, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ:5329, ಬೆಂಗಳೂರು
4. ಆಯುಕ್ತರು/ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
6. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು-02.
7. ಅಂತರಿಕ ಆರ್ಥಿಕ ಸಲಹೆಗಾರರು ಹಾಗೂ ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ, ತೋಟಗಾರಿಕೆ ಮತ್ತು ಪ.ಸಂ.ಮೀ.ಇಲಾಖೆ.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನ ಸೌಧ, ಬೆಂಗಳೂರು.
9. ಸಂಬಂಧಪಟ್ಟ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರು ಮತ್ತು ತಾಲ್ಲೂಕುಗಳ ಸಹಾಯಕ ಕೃಷಿ ನಿರ್ದೇಶಕರು (ಕೃಷಿ ನಿರ್ದೇಶಕರ ಮೂಲಕ).
10. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಮಾಹಿತಿಗಾಗಿ ಪ್ರತಿ:**

1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ -1 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು.